**ಕರ್ನಾಟಕ ಸರ್ಕಾರ**
**(ತಾಂತ್ರಿಕ ಶಿಕ್ಷಣ ಇಲಾಖೆ)**

ಸಂ.ಟಿಇಬಿ/11/ಇಸಿಎಸ್ (02)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01.
ದಿನಾಂಕ: 23/12/2017.

**ಸುತ್ತೋಲೆ**

ವಿಷಯ: 2017 ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಯಲ್ಲಿ ಮಾಲ್‌ಪ್ರಾಕ್ಟೀಸ್‌ಗೆ ಒಳಗಾಗಿರುವ ವಿದ್ಯಾರ್ಥಿಗಳ ಮುಂದಿನ ಸೆಮಿಸ್ಟರ್‌ನ ಪ್ರವೇಶದ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಪರೀಕ್ಷಾ ಮಂಡಳಿಯ 2017 ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಯಲ್ಲಿ 1, 3 ಮತ್ತು 5ನೇ ಸೆಮಿಸ್ಟರ್‌ನ ಪೂರ್ಣ ವಿಷಯಗಳಿಗೆ ಪರೀಕ್ಷೆಗೆ ಹಾಜರಾಗಿ ಮಾಲ್‌ಪ್ರಾಕ್ಟೀಸ್ ಪ್ರಕರಣ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಮುಂದಿನ ಆದೇಶದವರೆಗೆ 2 , 4 ಮತ್ತು 6ನೇ ಸೆಮಿಸ್ಟರ್‌ಗೆ ಯಾವುದೇ ಕಾರಣಕ್ಕೂ ಪ್ರವೇಶ ನೀಡಬಾರದು ಎಂದು ಸ್ಪಷ್ಟವಾಗಿ ತಿಳಿಸಲಾಗಿದೆ. ಸದರಿ ವಿದ್ಯಾರ್ಥಿಗಳ ವಿಚಾರಣೆಯನ್ನು ಮಂಡಳಿಯ ವಿದ್ಯಾರ್ಥಿ ಮಾಲ್‌ಪ್ರಾಕ್ಟೀಸ್ ವಿಚಾರಣಾ ಸಮಿತಿಯಿಂದ ವಿಚಾರಣೆ ನಡೆಸಿದ ನಂತರ ವಿಧಿಸಲಾದ ಶಿಕ್ಷೆಯ ಸ್ವರೂಪ ಪ್ರಕಟಿಸಲಾಗುವುದು ಮತ್ತು ಅಂತಹ ವಿದ್ಯಾರ್ಥಿಗಳ ಪ್ರವೇಶದ ಬಗ್ಗೆ ಸೂಚನೆಗಳನ್ನು ನೀಡಲಾಗುವುದು ಎಂದು ತಿಳಿಸಲಾಗಿದೆ.

ಶಿಕ್ಷೆಗಳ ಸ್ವರೂಪ ಪ್ರಕಟಿಸುವವರೆಗೆ ಸದರಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2 , 4 ಮತ್ತು 6ನೇ ಸೆಮಿಸ್ಟರ್ ಥಿಯರಿ ಮತ್ತು ಪ್ರಾಯೋಗಿಕ ತರಗತಿಗಳಿಗೆ ಹಾಜರಾಗಲು ಅನುಮತಿ ನೀಡುವಂತೆ ತಿಳಿಸಲಾಗಿದೆ. ಆದರೆ ಯಾವುದೇ ಕಾರಣಕ್ಕೂ ಮುಂದಿನ ಸೆಮಿಸ್ಟರ್‌ಗೆ ಪ್ರವೇಶ ನೀಡಬಾರದು ಎಂದು ಸ್ಪಷ್ಟವಾಗಿ ತಿಳಿಸಲಾಗಿದೆ. ಸೂಚನೆ ಮೀರಿ ಪ್ರವೇಶ ನೀಡಿದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಬಂಧಪಟ್ಟ ಪ್ರಿನ್ಸಿಪಾಲರೇ ನೇರ ಜವಾಬ್ದಾರರಾಗಿರುತ್ತಾರೆ ಹಾಗೂ ಈ ರೀತಿಯ ಪ್ರವೇಶವು ಅಸಿಂಧುವಾಗುತ್ತದೆ ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.

ಪ್ರತಿ:

ಇ-ಆಡಳಿತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

Ecs sv